ಶ್ರೀ ಗೂಳಿಹಟ್ಟಿ ಡಿ. ಶೇಖರ್ (ಜವಳಿ, ಯುವಜನ ಸೇವಾ ಮತ್ತು ಕ್ರೀಡಾ ಸಚಿವರು):–

ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ನಗರ, ಮಂಗಳಾ ಕ್ರೀಡಾಂಗಣದಲ್ಲಿ ಸಿಂಥೆಟಿಕ್ ಟ್ರ್ಯಾಕ್ ಅಳವಡಿಸುವ ಯೋಜನೆಯು ಸರ್ಕಾರದ ಮುಂದಿದೆ.

ಆ) ಪ್ರಸ್ತುತ 2010–11ನೇ ಸಾಲಿನಲ್ಲಿ ಮಂಗಳೂರಿನ ಮಂಗಳಾ ಕ್ರೀಡಾಂಗಣದಲ್ಲಿ ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್ ಅಳವಡಿಸುವ ಕಾಮಗಾರಿಗಾಗಿ ರೂ. 3.00 ಕೋಟಿ ಅನುದಾನವನ್ನು ಹೆಚ್ಚುವರಿಯಾಗಿ ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಅನುದಾನ ಮಂಜೂರಾದ ಕೂಡಲೇ ಉದ್ದೇಶಿತ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.

ಭೂಮಿ ಕೇಂದ್ರ

252 (820) ಶ್ರೀ ಖಾದರ್ ಯು.ಟಿ. (ಮಂಗಳೂರು):– ಕಂದಾಯ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಮಂಗಳೂರು ತಾಲ್ಲೂಕಿನಲ್ಲಿ ಸ್ಥಾಪಿತವಾಗಿರುವ ಭೂಮಿ ಕೇಂದ್ರದಲ್ಲಿ ಹೆಚ್ಚಿನ ಕೆಲಸದ ಒತ್ತಡದಿಂದಾಗಿ ರೈತರು ಹಾಗೂ ಜನಸಾಮಾನ್ಯರಿಗೆ ತುಂಬಾ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಕೇಂದ್ರಗಳನ್ನು ಹೋಬಳಿ ಮಟ್ಟದಲ್ಲಿ ಪ್ರಾರಂಭಿಸಿ ಜನಸಾಮಾನ್ಯರಿಗೆ ಅನುಕೂಲ ಮಾಡಿಕೊಡಲಾಗುವುದೆ?

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು):–

ಅ) ಹೌದು

ಆ) ಮಂಗಳೂರು ತಾಲ್ಲೂಕಿನಲ್ಲಿ ಭೂಮಿ ಕೇಂದ್ರವನ್ನು ಹೋಬಳಿ ಮಟ್ಟದಲ್ಲಿ ಪ್ರಾರಂಭಿಸುವ ಪ್ರಸ್ತಾವನೆಯ ಕುರಿತು ಸರ್ಕಾರವು ಪರಿಶೀಲಿಸುತ್ತಿದೆ.

ಪಶ್ಚಿಮ ವಾಹಿನಿ ಯೋಜನೆ

253 (821) ಶ್ರೀ ಖಾದರ್ ಯು.ಟಿ (ಮಂಗಳೂರು) – (ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು) ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ದಕ್ಷಿಣ ಕನ್ನಡ ಜಿಲ್ಲೆಯ ಪ್ರಮುಖ ಯೋಜನೆಗಳಲ್ಲಿ ಒಂದಾದ ಪಶ್ಚಿಮ ವಾಹಿನಿ ಯೋಜನೆ ಯಾವ ಹಂತದಲ್ಲಿದೆ?

ಆ) ಈ ಯೋಜನೆಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು

ಇ) ಈ ಯೋಜನೆಗಾಗಿ ವೆಚ್ಚ ಮಾಡಲು ಉದ್ದೇಶಿಸಿರುವ ಹಣವೆಷ್ಟು?

ಈ) ಈ ಯೋಜನೆಯನ್ನು ಎಂದು ಪೂರ್ಣಗೊಳಿಸಲಾಗುವುದು

ಶ್ರೀ ಗೋವಿಂದ ಎಂ. ಕಾರಜೋಳ (ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು):–

ಅ) ಪಶ್ಚಿಮ ವಾಹಿನಿ ಯೋಜನೆಗೆ ಕೇಂದ್ರ ಸರ್ಕಾರದಿಂದ ಅನುಮೋದನೆ ಕೋರಿ ರೂ. 295.00 ಕೋಟಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು. ಆದರೆ, ಕೇಂದ್ರ ಸರ್ಕಾರದ ಜಲಸಂಪನ್ಮೂಲ ಮಂತ್ರಾಲಯವು ಸಣ್ಣ ನೀರಾವರಿ ಇಲಾಖೆಯ ಯೋಜನೆಗಳಿಗೆ ಅನುದಾನ ನೀಡಲು ಮಾರ್ಗಸೂಚಿಯಲ್ಲಿ ಅವಕಾಶವಿರುವುದಿಲ್ಲವಾದ್ದರಿಂದ ರಾಜ್ಯ ಸರ್ಕಾರದ ಮಟ್ಟದಲ್ಲಿಯೇ ಕ್ರಮ ತೆಗೆದುಕೊಳ್ಳುವಂತೆ ತಿಳಿಸಿದೆ. ಈ ಹಿನ್ನೆಲೆಯಲ್ಲಿ ಪಶ್ಚಿಮ ವಾಹಿನಿ ಯೋಜನೆಯನ್ನು ಅನುಷ್ಠಾನಗೊಳಿಸಲು ಸಾಧ್ಯವಾಗಿಲ್ಲ. ಆದರೆ ಪಶ್ಚಿಮವಾಹಿನಿ ಯೋಜನೆಯಡಿ ಸೇರಿದ್ದ ಕಿಂಡಿ ಅಣೆಕಟ್ಟು ಕಾಮಗಾರಿಗಳನ್ನು ಆಧ್ಯತೆಯ ಮೇಲೆ ಪ್ರತಿ ವರ್ಷ ಆಯವ್ಯಯದಲ್ಲಿ ಲಭ್ಯವಾಗುತ್ತಿರುವ ಅನುದಾನದಿಂದ ಹಂತ ಹಂತವಾಗಿ ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗುತ್ತಿದೆ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

ಮೈಗೂರು ಗ್ರಾಮದ ಪುನರ್‌ವಸತಿ

256 (291) ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ (ಜಮಖಂಡಿ) – ಮಾನ್ಯ ಜಲಸಂಪನ್ಮೂಲ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಜಮಖಂಡಿ ತಾಲ್ಲೂಕು ಮೈಗೂರು ಗ್ರಾಮದ ಸ್ಥಳಾಂತರಕ್ಕೆ ನಿಗದಿಪಡಿಸಿದ ಪುನರ್ ವಸತಿ ಕೇಂದ್ರವು ಜವಳು ಪ್ರದೇಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ;

ಆ) ಸದರಿ ಗ್ರಾಮದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನರು ವಾಸಿಸುವ ಸ್ಥಳ ಆರೋಗ್ಯ ದೃಷ್ಟಿಯಿಂದ ಯೋಗ್ಯವಾಗಿಲ್ಲವಾದ್ದರಿಂದ ಅವರಿಗೆ ಬೇರೆ ಪುನರ್ ವಸತಿಗೆ ಸ್ಥಳ ನಿಗದಿಪಡಿಸುವುದು ಸೂಕ್ತವಲ್ಲವೇ;

ಇ) ಸೂಕ್ತವಾಗಿದ್ದಲ್ಲಿ ಯಾವ ಕ್ರಮ ಕೈಗೊಳ್ಳುವುದು?